ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ಮೌಲ್ಯಮಾಪನ/01/2018-19 ದಿನಾಂಕ: 09/01/2019

– ಸುತ್ತೋಲೆ –

ವಿಷಯ : 2018-19 ನೇ ಸಾಲಿಗೆ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರ ಮಾಹಿತಿಗಳನ್ನು ಮೌಲ್ಯಮಾಪನ ಕಾರ್ಯದ ಉದ್ದೇಶಕ್ಕಾಗಿ ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಿರುವ ವಿವರಗಳ ಶಾಲಾ ವರದಿಯನ್ನು(Report) ತೆಗೆದುಕೊಳ್ಳುವ ಕುರಿತು.

ಉಲ್ಲೇಖ : 1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡಾವಳಿಗಳು ದಿನಾಂಕ:20.08.2018

2. ಈ ಕಛೇರಿಯ ಸಮಸಂಖ್ಯೆಯ ಪತ್ರ ದಿ:29.11.2018 ಹಾಗೂ 07.12.2018

*****

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯಲ್ಲಿನ ಶಿಕ್ಷಕರ ವಿವರಗಳನ್ನು ಏಪ್ರಿಲ್-2019 ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮೌಲ್ಯಮಾಪನ ಕಾರ್ಯ ನಿರ್ವಹಿಸುವ ಸಲುವಾಗಿ ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡುವಂತೆ ಉಲ್ಲೇಖ-2 ರಲ್ಲಿ ಸೂಚಿಸಲಾಗಿತ್ತು.

ಮಂಡಳಿಯ ಜಾಲತಾಣದಲ್ಲಿ ಲಭ್ಯವಿರುವ ತಂತ್ರಾಂಶವನ್ನು ಬಳಸಿ ತಮ್ಮ ವ್ಯಾಪ್ತಿಯ ಬಹುತೇಕ ಎಲ್ಲಾ ಶಾಲೆಗಳ ಮುಖ್ಯಸ್ಥರು ಆಯಾ ಶಾಲೆಯ ಶಿಕ್ಷಕರ ವಿವರಗಳನ್ನು ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಿರುತ್ತೀರಿ. ಈ ರೀತಿ ಅಪ್‌ಡೇಟ್ ಮಾಡಿರುವ ಶಿಕ್ಷಕರ ವಿವರಗಳ ವರದಿಯನ್ನು ಡೌನ್‌ಲೋಡ್ ಮಾಡಿಕೊಳ್ಳುವ ವ್ಯವಸ್ಥೆಯನ್ನು ಮಾಡಲಾಗಿದೆ.

ಆಯಾ ಶಾಲೆಯ ಮುಖ್ಯಸ್ಥರು ತಮ್ಮ ಶಾಲೆಯ ಶಿಕ್ಷಕರ ವರದಿಯನ್ನು ದ್ವಿಪ್ರತಿಯಲ್ಲಿ (ಒಂದು ಶಾಲಾ ಪ್ರತಿ ಮತ್ತು ಒಂದು ಕೆ.ಎಸ್.ಇ.ಇ.ಬಿ ಪ್ರತಿ) ಡೌನ್‌ಲೋಡ್ ಮಾಡಿಕೊಂಡು, ಪರಿಶೀಲಿಸಿ ಒಂದು ಪ್ರತಿಯನ್ನು ಶಾಲೆಯ ಮುಖ್ಯಸ್ಥರು ದೃಢೀಕರಿಸಿ ಮಂಡಳಿಯ ತಮ್ಮ ಜಿಲ್ಲೆಯ ಶಾಖಾಧಿಕಾರಿಗಳಿಗೆ ದಿನಾಂಕ:19.01.2018 ರೊಳಗೆ ಸಲ್ಲಿಸಲು ತಿಳಿಸಿದೆ.

9/1/19

(ಸುಮಂಗಲ. ವಿ)

ನಿರ್ದೇಶಕರು, ಪರೀಕ್ಷೆಗಳು

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ